# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ , ಬಿ. ಹೆಚ್. ರಸ್ತೆ , ತುಮಕೂರು - 572 103

**ಸಂಖ್ಯೆ:ತು.ವಿ.:ಅ.ವಿ.:ಸ್ಕೌಟ್ಸ್&ಗೈಡ್ಸ್:2025-26** | 3919

**ದಿನಾಂಕ:18.03.2026**

## : ಸುತ್ತೋಲೆ :

**ವಿಷಯ :** ವಿಶ್ವವಿದ್ಯಾನಿಲಯ ವ್ಯಾಪ್ತಿಯ ಕಾಲೇಜುಗಳಲ್ಲಿ ರೋವರ್ ಮತ್ತು ರೇಂಜರ್ ಘಟಕಗಳನ್ನು ಸ್ಥಾಪಿಸಲು ಆಯಾಯ ಕಾಲೇಜಿನ ಉಪನ್ಯಾಸಕ-ಉಪನ್ಯಾಸಕಿಯವರುಗಳಿಗೆ ಏಳು ದಿನಗಳ ತರಬೇತಿ ಶಿಬಿರವನ್ನು ಆಯೋಜಿಸುವ ಬಗ್ಗೆ ಮನವಿ ಸಲ್ಲಿಸಿರುವ ಕುರಿತು.

**ಉಲ್ಲೇಖ :** 1. ಮಾನ್ಯ ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಪತ್ರದ ದಿನಾಂಕ:02.03.2026
2. ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ:13.03.2026 (ಕಂಡಿಕೆ-88)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು, ಕರ್ನಾಟಕ ಸರ್ಕಾರ ಇವರು ಉಲ್ಲೇಖ (1) ರ ಪತ್ರವನ್ನು ಸಲ್ಲಿಸಿ ಯುವ ಜನರಲ್ಲಿ ಶಿಸ್ತು, ಸೇವಾ ಮನೋಭಾವ ಮತ್ತು ನಾಯಕತ್ವ ಗುಣಗಳನ್ನು ಬೆಳೆಸಲು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯು ರೋವರ್ ಸ್ಕೌಟ್ ಲೀಡರ್(ಪುರುಷರಿಗೆ) ಮತ್ತು ರೇಂಜರ್ ಲೀಡರ್(ಮಹಿಳೆಯರಿಗೆ) ಘಟಕಗಳು ಪ್ರಮುಖ ಪಾತ್ರವಹಿಸುತ್ತವೆ. ಆದಾಗ್ಯೂ ಅನೇಕ ಕಾಲೇಜುಗಳಲ್ಲಿ ಘಟಕಗಳು ಪ್ರಾರಂಭವಾಗಿರುವುದಿಲ್ಲ. ಈ ನಿಟ್ಟಿನಲ್ಲಿ ಘಟಕಗಳನ್ನು ಯಶಸ್ವಿಯಾಗಿ ಪ್ರಾರಂಭಿಸಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರಿ ಆಗಲು ತಮ್ಮ ವಿಶ್ವವಿದ್ಯಾಲಯ ವ್ಯಾಪ್ತಿಯ ಪ್ರತಿ ಕಾಲೇಜುಗಳಿಂದ ಕನಿಷ್ಠ ಒಬ್ಬರು ಪುರುಷ ಮತ್ತು ಒಬ್ಬರು ಮಹಿಳಾ ಉಪನ್ಯಾಸಕರಿಗೆ ಮೂಲಭೂತ ತರಬೇತಿಯ ಅಗತ್ಯವಿದೆ. ತರಬೇತಿ ಪಡೆದ ಉಪನ್ಯಾಸಕರು ಮಾತ್ರವೇ ಘಟಕದ ನಾಯಕರಾಗಿ (Rover Scout Leader/Ranger Leader) ಕಾರ್ಯನಿರ್ವಹಿಸಲು ಅರ್ಹರಾಗಿರುತ್ತಾರೆ ಎಂಬುದಾಗಿ ತಿಳಿಸಿ ತಮ್ಮ ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಕಾಲೇಜುಗಳ ಉಪನ್ಯಾಸಕ-ಉಪನ್ಯಾಸಕಿಯವರುಗಳಿಗೆ ಏಳು ದಿನಗಳ ಮೂಲ ತರಬೇತಿ ಶಿಬಿರವನ್ನು ಮಾರ್ಚ್/ಏಪ್ರಿಲ್ ತಿಂಗಳುಗಳಲ್ಲಿ ಆಯೋಜಿಸಲು ಹಾಗೂ ತರಬೇತಿಗೆ ಸಂಬಂಧಿಸಿದಂತೆ ಏಳು ದಿನಗಳಿಗೆ ತಗಲುವ ಊಟದ ವೆಚ್ಚ, ಸಮವಸ್ತ್ರ, ಅವಶ್ಯಕ ಪ್ರಯಾಣ ಭತ್ಯೆ ಹಾಗೂ ರೋವರ್-ರೇಂಜರ್ ದಳಗಳ ನೋಂದಣಿ/ನವೀಕರಣ ಶುಲ್ಕವನ್ನು ಸಂಬಂಧಪಟ್ಟ ಕಾಲೇಜುಗಳ ರೋವರ್-ರೇಂಜರ್ ಚಾಲ್ತಿ ನಿಧಿ ಅಥವಾ ಸಂಚಿತ ನಿಧಿಯಿಂದ ಭರಿಸಲು ಅನುಮತಿ ಕೋರಿ ಪ್ರತಿ ಕಾಲೇಜಿನಲ್ಲಿಯೂ ರೋವರ್-ರೇಂಜರ್ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಯಶಸ್ವಿಗೊಳಿಸಲು ಪ್ರೋತ್ಸಾಹ ಮತ್ತು ಸಹಕಾರ ನೀಡುವಂತೆ ಕೋರಿರುತ್ತಾರೆ.

ತತ್ಸಂಬಂಧ ಸದರಿಯವರ ಉಲ್ಲೇಖಿತ ಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ಪತ್ರದಲ್ಲಿನ ವಿಷಯಕ್ಕೆ ಸಂಬಂಧಪಟ್ಟಂತೆ ನಿಯಮಾನುಸಾರ ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಮಗೆ ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಮಾನ್ಯ ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು, ದಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಸ್ಟೇಟ್ ಹೆಡ್ ಕ್ವಾರ್ಟರ್ಸ್, ಸಂಖ್ಯೆ 39, ಶಾಂತಿಗೃಹ, ಪ್ಯಾಲೇಸ್ ರಸ್ತೆ, ಬೆಂಗಳೂರು–560001 – **ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ.**
2. ಜಿಲ್ಲಾ ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ, ಕಂಠೀರವ ಸ್ಕೌಟ್ಸ್ ಗೈಡ್ಸ್ ಭವನ, ಗಾಂಧಿನಗರ, ತುಮಕೂರು – 572102.
3. ಸಂಯೋಜಕರು, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮುಖ್ಯಸ್ಥರು, ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳ ರೋವರ್ಸ್ ಮತ್ತು ರೇಂಜರ್ಸ್ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು :– **ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಘಟಕ/ಸಂಯೋಜಿತ ಸ್ನಾತಕ/ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ.**
8. ಕಚೇರಿ ಪ್ರತಿ.